# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 891(1124)
ಸದಸ್ಯರ ಹೆಸರು : ಶ್ರೀಮತಿ ಹೇಮಲತಾ ನಾಯಕ್ (ವಿಧಾನ ಸಭೆಯಿಂದ ಚುನಾಯಿತರಾದವರು)
ಉತ್ತರಿಸುವ ದಿನಾಂಕ : 17.03.2025.
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು.

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ | ಕೊಪ್ಪಳ ಜಿಲ್ಲೆಯಲ್ಲಿ ಸರ್ಕಾರಿ ಕನ್ನಡ ಪ್ರೌಢ ಶಾಲೆಯಲ್ಲಿ ಓದುತ್ತಿರುವ ಸುಮಾರು 7000 ಮಕ್ಕಳು ಕನ್ನಡ ಓದಲು ಬರುವುದಿಲ್ಲ ಎನ್ನುವ ವರದಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈ ಸಮಸ್ಯೆಗೆ ಕಾರಣವೇನು ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆ ಕಾರಣದಿಂದವೆ; (ವಿವರ ನೀಡುವುದು) | ಕೊಪ್ಪಳ ಜಿಲ್ಲೆಯಲ್ಲಿ 2024 ರ ಎಸ್.ಎಸ್.ಎಲ್.ಸಿ ಫಲಿತಾಂಶ ಕಡಿಮೆ ಬಂದ ಕಾರಣ ಎಸ್.ಎಸ್.ಎಲ್.ಸಿ ಫಲಿತಾಂಶ ಮುಂದೆ ಹೀಗಾಗಬಾರದೆಂದು 10ನೇ ತರಗತಿ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟ ಯಾವ ಹಂತದಲ್ಲಿದೆ ಎಂಬುದರ ಬಗ್ಗೆ ಆಯಾ ಶಾಲಾ ಶಿಕ್ಷಕರ ಮೂಲಕ ವಿದ್ಯಾರ್ಥಿಗಳ ಕಲಿಕಾ ಗುಣಮಟ್ಟದ ಬಗ್ಗೆ ಪರೀಕ್ಷೆ ಮಾಡಲಾಯಿತು. 2025ರಲ್ಲಿ 10ನೇ ತರಗತಿಯ ಒಟ್ಟು 25000 ವಿದ್ಯಾರ್ಥಿಗಳಲ್ಲಿ 7000 ವಿದ್ಯಾರ್ಥಿಗಳು ಕಲಿಕೆಯಲ್ಲಿ ಹಿಂದುಳಿದಿರುವ ಬಗ್ಗೆ ಗುರುತಿಸಲಾಯಿತು. ಈ ವಿದ್ಯಾರ್ಥಿಗಳಿಗೆ ಕ್ರಿಯಾ ಯೋಜನೆ ಸಿದ್ಧಪಡಿಸಿಕೊಂಡು ಈ ಕೆಳಗಿನಂತೆ ಅನುಷ್ಠಾನಗೊಳಿಸಲಾಯಿತು.<br>1. ಪ್ರತಿ ದಿನ ಬೆಳಿಗ್ಗೆ ಶಾಲಾ ಅವಧಿಕ್ಕಿಂತ ಮುಂಚೆ ವಿಶೇಷ ತರಗತಿ ತೆಗೆದುಕೊಳ್ಳಲಾಯಿತು.<br>2. ಸಾಯಂಕಾಲ ಗುಂಪು ಅಧ್ಯಯನ ಕೈಗೊಳ್ಳಲಾಯಿತು.<br>3. ಪ್ರತಿ ದಿನ ಒಂದು ಪ್ರಶ್ನೆ 6 ವಿಷಯಗಳಲ್ಲಿ ಕೊಟ್ಟು ಉತ್ತರಗಳನ್ನು ಪುನಃ ಪುನಃ ಬರೆಯಿಸಿ ಬರವಣಿಗೆ ಕೌಶಲ್ಯ ಅಭಿವೃದ್ಧಿ ಪಡಿಸಲಾಯಿತು.<br>4. ಪ್ರತಿ ದಿನ ಬೆಳಿಗ್ಗೆ 4-30 ಕ್ಕೆ ಎಚ್ಚರಗೊಳ್ಳುವ ಕರೆ (wake up call) ಮಾಡಿ ವಿದ್ಯಾರ್ಥಿಗಳನ್ನು ಅಭ್ಯಾಸ ಮಾಡಲು ಹಚ್ಚಲಾಯಿತು.<br>5. ಖಾಲಿ ಇದ್ದ ಪ್ರಾಥಮಿಕ- 1874, ಪ್ರೌಢ-539 ಹುದ್ದೆಗಳಿಗೆ ಅತಿಥಿ ಶಿಕ್ಷಕರನ್ನು ನೇಮಕ ಮಾಡಲಾಯಿತು. ಇಲಾಖೆಯ ಸುತ್ತೋಲೆಯಂತೆ ಎಸ್.ಎಸ್.ಎಲ್.ಸಿ ಫಲಿತಾಂಶ ಸುಧಾರಣೆಗೆ 20 ಅಂಶಗಳ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲಾಯಿತು.<br>ಈಗ ವಿದ್ಯಾರ್ಥಿಗಳು ಸ್ಪಷ್ಟವಾಗಿ ಓದುತ್ತಿದ್ದಾರೆ ಮತ್ತು ಬರೆಯುತ್ತಿದ್ದಾರೆ ಹಾಗೂ ಗಣಿತದ ಲೆಕ್ಕಗಳನ್ನು ಮಾಡುತ್ತಿದ್ದಾರೆ. |
| ಆ | ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಸರ್ಕಾರಿ ಕನ್ನಡ ಪ್ರೌಢ ಶಾಲೆಯಲ್ಲಿ ಓದುತ್ತಿರುವ ಎಷ್ಟು ಮಕ್ಕಳಿಗೆ ಕನ್ನಡ ಓದಲು ಬರುವುದಿಲ್ಲ; (ಜಿಲ್ಲಾವಾರು ವಿವರ ನೀಡುವುದು) | ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನವನ್ನು ಸಾಧಿಸಿದ / ಸಾಧಿಸದ (FLN) ಮಕ್ಕಳ ಮಾಹಿತಿಯನ್ನು ಜಿಲ್ಲಾವಾರು ಡಯಟ್‌ಗಳ ಮೂಲಕ ಗುರುತಿಸುವ ಕಾರ್ಯ ಪ್ರಗತಿಯಲ್ಲಿದೆ. |

| | | |
|---|---|---|
| ಇ | ಕನ್ನಡ ಶಾಲೆಗಳಲ್ಲಿ ಕನ್ನಡ ಓದಲು ಬರದೇ ಇರುವುದನ್ನು ಗಂಭೀರವಾಗಿ ಪರಿಗಣಿಸಲಾಗಿದೆಯೇ; ಹಾಗಿದ್ದಲ್ಲಿ ಸದರಿ ಮಕ್ಕಳಿಗೆ ಕನ್ನಡ ಸರಿಯಾಗಿ ಕಲ್ಪಿಸಲು ಸರ್ಕಾರ ಕೈಗೊಂಡ ಕ್ರಮವೇನು; | • 2026-27 ನೇ ಸಾಲಿನ ವೇಳೆಗೆ ಸಂಪೂರ್ಣ ಬುನಾದಿ ಸಾಕ್ಷರತೆ ಮತ್ತು ಸಂಖ್ಯಾಜ್ಞಾನವನ್ನು (FLN) ಸಾಧಿಸುವ ಗುರಿಯೊಂದಿಗೆ ಶಾಲಾ ಹಂತದಲ್ಲಿ FLN ಮಕ್ಕಳನ್ನು ಗುರುತಿಸಿ ಕಾರ್ಯಕ್ರಮದ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಕ್ಲಸ್ಟರ್‌ನಿಂದ ರಾಜ್ಯಹಂತದವರೆಗೆ FLN ಕೋಶ ಸ್ಥಾಪಿಸಿ ಈ ಮೂಲಕ ಕಾರ್ಯಕ್ರಮದ ಅನುಪಾಲನೆ ಮಾಡಲಾಗುತ್ತಿದೆ.<br>• ಸದರಿ ಕಾರ್ಯಕ್ರಮದ ವತಿಯಿಂದ ಡಯಟ್‌ಗಳ ಮೂಲಕ ಭಾಷೆ ಮತ್ತು ಗಣಿತ ಮಾಸಾಚರಣೆಗಳನ್ನು ನಡೆಸಲಾಗುತ್ತಿದೆ.<br>• FLN ಸಾಧಿಸಿದ ಶಾಲೆಗಳ ಮುಖ್ಯಸ್ಥರು "FLN ಸಾಧಿಸಿದ ಶಾಲೆ" ಎಂಬ ಸ್ವಯಂ ಘೋಷಣೆಯನ್ನು ಮಾಡಿಕೊಂಡಿರುವುದನ್ನು ಡಯಟ್‌ಗಳ ಮೂಲಕ ಖಾತ್ರಿಪಡಿಸಿಕೊಂಡು ಆ ಮೂಲಕ ಶಾಲೆಗಳನ್ನು ಉತ್ತೇಜಿಸುವ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.<br>• ಸರ್ಕಾರೇತರ ಸಂಸ್ಥೆಗಳಾದ (ಅಕ್ಷರ ಫೌಂಡೇಷನ್, ಪ್ರಥಮ್, ಮಂತ್ರ ಫಾರ್ ಚೇಂಜ್) ಸಹಕಾರದೊಂದಿಗೆ FLN ಸಾಧಿಸಲು ಚಟುವಟಿಕೆಗಳನ್ನು ಡಯಟ್‌ಗಳ ಹಂತದಲ್ಲಿ ಹಮ್ಮಿಕೊಳ್ಳಲಾಗಿದೆ.<br>• 2024-25 ನೇ ಸಾಲಿನಲ್ಲಿ ಪೂರ್ವಪ್ರಾಥಮಿಕ ತರಗತಿಗಳಲ್ಲಿ ಬೋಧಿಸುತ್ತಿರುವ ಶಿಕ್ಷಕರಿಗೆ ಮತ್ತು ಅನುಷ್ಠಾನಾಧಿಕಾರಿಗಳಿಗೆ 02 ದಿನಗಳ ಆಟಿಕೆ ಆಧಾರಿತ ಶಿಕ್ಷಣ ಶಾಸ್ತ್ರದ (Toy Based Pedagogy) ಕಾರ್ಯಗಾರವನ್ನು ಬೋಧಿಸುವ ಶಿಕ್ಷಕರಿಗೆ ಬೋಧನಾ ವಿಧಾನದಲ್ಲಿ ತರಬೇತಿಯನ್ನು ನೀಡಿ ಅನುಪಾಲನೆ ಮಾಡಲಾಗುತ್ತಿದೆ.<br>• 2024-25 ನೇ ಸಾಲಿನಲ್ಲಿ FLN ಪರಿಣಾಮಕಾರಿ ಅನುಷ್ಠಾನಕ್ಕಾಗಿ ಶಿಕ್ಷಕರಿಗೆ ಹಾಗೂ ವಿವಿಧ ಹಂತದ ಅನುಷ್ಠಾನಾಧಿಕಾರಿಗಳಿಗೆ 02 ದಿನಗಳ ತರಬೇತಿಯನ್ನು ರಾಜ್ಯ ಕಛೇರಿಯಿಂದ ಹಮ್ಮಿಕೊಳ್ಳಲಾಗಿದೆ.<br>• 'ಓದು ಕರ್ನಾಟಕ' ಕಾರ್ಯಕ್ರಮವು "ಕಲಿಕಾ ಮಟ್ಟಕ್ಕೆ ಅನುಗುಣವಾಗಿ ಬೋಧನೆ – Teaching at the Right Level (TaRL)" ಎಂಬ ಬೋಧನಾ ವಿಧಾನವನ್ನು ಒಳಗೊಂಡಿದ್ದು, ಇದರ ಅನ್ವಯ ಮೊದಲು ಮಕ್ಕಳ ಕಲಿಕಾ ಮಟ್ಟಗಳನ್ನು ಸರಳ ಮೌಲ್ಯಮಾಪನದ ಮೂಲಕ ಗುರುತಿಸಿಕೊಂಡು ನಂತರ ಕಲಿಕಾ ಮಟ್ಟಗಳಿಗೆ ಅನುಗುಣವಾಗಿ ಮಕ್ಕಳ ಗುಂಪುಗಳನ್ನು ಮಾಡಿ, ಪ್ರತಿ ಗುಂಪಿಗೂ ಸೂಕ್ತವಾದ ಕಲಿಕಾ |

| | | |
|---|---|---|
| | | ಸಾಮಗ್ರಿಗಳನ್ನು ನೀಡಿ ನಂತರ ಚಟುವಟಿಕೆ ಆಧಾರಿತವಾಗಿ ಕಲಿಸುವ ಒಂದು ಅತ್ಯಂತ ಪರಿಣಾಮಕಾರಿ ಕಲಿಕಾ ಕ್ರಮವಾಗಿದೆ. ವಿವಿಧ ಹಂತದಲ್ಲಿನ ಮೌಲ್ಯಮಾಪನ ದತ್ತಾಂಶವನ್ನು ಶಾಲಾ ಹಂತದಲ್ಲಿ ಡಿಜಿಟಲ್ ಪ್ಲಾಟ್‌ಫಾರ್ಮ್‌ನಲ್ಲಿ ಆಪ್‌ಲೋಡ್ ಮಾಡಲಾಗುತ್ತದೆ. ಮೌಲ್ಯಮಾಪನ ದತ್ತಾಂಶದ ವಿಶ್ಲೇಷಣೆಯನ್ನು ವಿವಿಧ ಹಂತಗಳಲ್ಲಿ ಅಧಿಕಾರಿಗಳೊಂದಿಗೆ, ಪರಿಶೀಲನಾ ಸಭೆಗಳಲ್ಲಿ ಹಂಚಿಕೊಳ್ಳಲಾಗುತ್ತದೆ.<br>• 'ಓದು ಕರ್ನಾಟಕ' ಕಾರ್ಯಕ್ರಮವು 60 ದಿನಗಳ ಕಾರ್ಯಕ್ರಮವಾಗಿದ್ದು, ಒಮ್ಮೆ ತರಬೇತಿ ಪಡೆದ ಶಿಕ್ಷಕರು ತರಗತಿಯ ಮಕ್ಕಳೊಂದಿಗೆ ಭಾಷೆ ಮತ್ತು ಗಣಿತದ ಚಟುವಟಿಕೆಗಳನ್ನು ಪ್ರತಿದಿನ 120 ನಿಮಿಷಗಳ ಕಾಲ (ಭಾಷೆಗೆ 1 ಗಂಟೆ ಮತ್ತು ಗಣಿತಕ್ಕೆ 1 ಗಂಟೆ) ನಡೆಸುತ್ತಾರೆ. ಈ ಕಾರ್ಯಕ್ರಮವು ಕಡಿಮೆ ಅವಧಿಯಲ್ಲಿ ಮಕ್ಕಳ ಬುನಾದಿ ಭಾಷಾ ಮತ್ತು ಗಣಿತ ವಿಷಯಗಳ ಕಲಿಕಾ ಮಟ್ಟವನ್ನು ಹೆಚ್ಚಿಸುವಲ್ಲಿ ಗಮನಾರ್ಹ ಫಲಿತಾಂಶಗಳನ್ನು ನೀಡಿದೆ. |
| ಈ | ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳೆಷ್ಟು; ಸದರಿ ಹುದ್ದೆಗಳನ್ನು ಯಾವ ಕಾಲವಿತಿಯೊಳಗೆ ಭರ್ತಿ ಮಾಡಲು ಸರ್ಕಾರಕ್ಕೆ ಇರುವ ತೊಂದರೆ ಏನು? (ಜಿಲ್ಲಾವಾರು ವಿವರ ನೀಡುವುದು) | ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಸಂಖ್ಯೆ: 49729<br>ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆ ಸಂಖ್ಯೆ: 11796<br>1. 2021-22 ನೇ ಸಾಲಿನಲ್ಲಿ ರಾಜ್ಯದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ ಖಾಲಿ ಇದ್ದ ಪದವೀಧರ ಪ್ರಾಥಮಿಕ ಶಿಕ್ಷಕರು (6 ರಿಂದ 8 ನೇ ತರಗತಿ) 15000 ಹುದ್ದೆಗಳ ನೇಮಕಾತಿಗಾಗಿ ದಿನಾಂಕ: 21.03.2022 ರಂದು ಅಧಿಸೂಚಿಸಲಾಗಿತ್ತು. 15000 ಹುದ್ದೆಗಳಿಗೆ ಎದುರಾಗಿ ಒಟ್ಟು 13352 ಅಭ್ಯರ್ಥಿಗಳು ನಿಯಮಾನುಸಾರ ಅರ್ಹರಾಗಿರುತ್ತಾರೆ. ಅಭ್ಯರ್ಥಿಗಳು ಸಲ್ಲಿಸಿರುವ ದಾಖಲೆಗಳ ನೈಜತೆ ಪರಿಶೀಲನೆ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಸಕ್ಷಮ ಪ್ರಾಧಿಕಾರದಿಂದ ಸ್ವೀಕೃತವಾಗಿ ನಿಯಮಾನುಸಾರ ಅರ್ಹರಾಗಿರುವ 12813 ಅಭ್ಯರ್ಥಿಗಳ ಪೈಕಿ 12285 ಈಗಾಗಲೇ ಕೌನ್ಸಿಲಿಂಗ್ ಮೂಲಕ ಶಾಲೆಗಳಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ.<br>2. ಉಳಿದಂತೆ ಬೋಧನೆಗೆ ಅವಶ್ಯಕತೆ ಇರುವ ಪಿಎಸ್‌ಟಿ ಹಾಗೂ ಜಿಪಿಟಿ ವೃಂದದ ಖಾಲಿ ಹುದ್ದೆಗಳಿಗೆ ಎದುರಾಗಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶೈಕ್ಷಣಿಕ ವರ್ಷದ ಅಂತ್ಯದವರೆಗೆ ಒಟ್ಟು 35000 ಅತಿಥಿ ಶಿಕ್ಷಕರನ್ನು ಹಾಗೂ ಪ್ರೌಢಶಾಲೆಯಲ್ಲಿ 10,000 ಅತಿಥಿ ಶಿಕ್ಷಕರನ್ನು ನೇಮಕಾತಿ ಮಾಡಿಕೊಳ್ಳುವ ಮೂಲಕ ಶಿಕ್ಷಕರ ಕೊರತೆಯನ್ನು ನೀಗಿಸಲು ಕ್ರಮವಹಿಸಲಾಗಿದೆ. |

| | | |
|---|---|---|
| | | 3. ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಲ್ಲಿ ಖಾಲಿಯಿರುವ ಹುದ್ದೆಗಳಿಗೆ ನೇರ ನೇಮಕಾತಿಯಿಂದ ಭರ್ತಿ ಮಾಡಬೇಕಾದ ಹುದ್ದೆಗಳಲ್ಲಿ ಪ್ರಾಥಮಿಕ ವಿಭಾಗಕ್ಕೆ 7500 ಮತ್ತು ಪ್ರೌಢಶಾಲಾ ವಿಭಾಗಕ್ಕೆ 2500 ಹುದ್ದೆಗಳು ಸೇರಿದಂತೆ ಒಟ್ಟು 10000 ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಸಂಬಂಧ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಲಾಗುತ್ತಿದೆ.<br><br>4. ಸರ್ಕಾರದ ಆದೇಶ ಸಂಖ್ಯೆ: ಇಪಿ 230 ಪಿಬಿಎಸ್ 2024 ದಿನಾಂಕ: 07.10.2024 ರ ಆದೇಶದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶದ 07 ಜಿಲ್ಲೆಗಳಲ್ಲಿ ಖಾಲಿಯಿರುವ ಹುದ್ದೆಗಳಲ್ಲಿ ಪ್ರಾಥಮಿಕ ವಿಭಾಗಕ್ಕೆ 4882 ಮತ್ತು ಪ್ರೌಢಶಾಲಾ ವಿಭಾಗಕ್ಕೆ 385 ಹುದ್ದೆಗಳು ಸೇರಿ ಒಟ್ಟು 5267 ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.<br><br>5. ಸಿಆಸುಇ 388 ಸನೆನಿ 2024 ದಿನಾಂಕ: 25.11.2024 ರ ಆದೇಶದಲ್ಲಿ ದಿನಾಂಕ: 28.10.2024 ರಂದು ನಡೆದ ಸಚಿವ ಸಂಪುಟ ಸಭೆಯಲ್ಲಿ ತೆಗೆದುಕೊಂಡ ನಿರ್ಣಯದಂತೆ ರಾಜ್ಯ ಸಿವಿಲ್ ಸೇವೆಗಳಲ್ಲಿನ ಮೀಸಲಾತಿ ಅನ್ವಯವಾಗುವ ವೃಂದಗಳಲ್ಲಿನ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಹೊಸದಾಗಿ ಯಾವುದೇ ಅಧಿಸೂಚನೆಯನ್ನು ತಕ್ಷಣದಿಂದ ಜಾರಿಗೆ ಬರುವಂತೆ ಮುಂದಿನ ಆದೇಶದವರೆಗೂ ಹೊರಡಿಸಬಾರದೆಂದು ಸೂಚಿಸಲಾಗಿದೆ. |

**ಇಪಿ 108 ಎಸ್‌ಇಎಸ್ 2025**

**(ಎಸ್ ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ**
**ಇಲಾಖಾ ಸಚಿವರು**